RNU AIR DHARWAD

AUGUST 15, 2025

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ದೇಶದ 79 ನೇ ಸ್ವಾತಂತ್ರ್ಯ ದಿನಾಚರಣೆಯನ್ನು, ಇಂದು ನಾಡಿನೆಲ್ಲೆಡೆ ಸಂಭ್ರಮ ಹಾಗೂ ಸಡಗರದೊಂದಿಗೆ ಆಚರಿಸಲಾಗುತ್ತಿದೆ. ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೆಂಗಳೂರು, ಮಾಣಿಕ್ ಶಾ ಪರೇಡ್ ಮೈದಾನದಲ್ಲಿ ಧ್ವಜಾರೋಹಣಗೈದು, ಸ್ವಾತಂತ್ರ್ಯ ದಿನಾಚರಣೆಯ ಸಂದೇಶ ನೀಡಿದರು. ಇಂದು ಭಾರತವು ಬ್ರಿಟಿಷರ ವಸಾಹತುಶಾಹಿ ಆಡಳಿತದಿಂದ ಮುಕ್ತಗೊಂಡ ಶುಭದಿನವಾಗಿದೆ. ಮಹಾತ್ಮ ಗಾಂಧೀಜಿ, ಜವಹರಲಾಲ್ ನೆಹರೂ, ಸರ್ದಾರ ವಲ್ಲಭಭಾಯಿ ಪಟೇಲ್, ಸುಭಾಷ್ಚಂದ್ರ ಬೋಸ್, ಮೌಲಾನಾ ಅಬ್ದುಲ್ ಕಲಾಂ ಅಜಾದ್ ಸೇರಿದಂತೆ ಲಕ್ಷಾಂತರ ಹೋರಾಟಗಾರರ ತ್ಯಾಗ, ಬಲಿದಾನದ ಮೂಲಕ ದೇಶವು ಸ್ವಾತಂತ್ರ್ಯ ಪಡೆದಿದೆ. ಸಂವಿಧಾನದ ಮೂಲತತ್ವಗಳ ಮೂಲಕ ದೇಶದ ಸ್ವಾತಂತ್ರ್ಯ ಅಖಂಡವಾಗಿಯೂ, ಸಮಗ್ರವಾಗಿಯೂ ಸದಾಕಾಲ ನಳನಳಿಸಬೇಕು ಎಂದು ಆಶಿಸಿದರು.

<><><>

ಹೊಸದಿಲ್ಲಿಯ ಕೆಂಪುಕೋಟೆಯಲ್ಲಿ ರಾಷ್ಟ್ರಧ್ವಜಾರೋಹಣಗೈದು ಮಾತನಾಡಿದ , ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶವಾಸಿಗಳಿಗೆ 79 ನೇ ಸ್ವಾತಂತ್ರ್ಯ ದಿನದ ಶುಭಾಶಯಗಳನ್ನು ಕೋರಿದರು. ಭಾರತ ದೇಶವು ಪ್ರಸ್ತುತ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಬೆಳೆಯುತ್ತಿದೆ, ದೇಶದಲ್ಲಿ 6 ಹೊಸ ಸೆಮಿಕಂಡಕ್ಟರ ಉತ್ಪಾದನಾ ಘಟಕಗಳು ಈ ವರ್ಷದ ಕೊನೆಯಲ್ಲಿ ಕಾರ್ಯರೂಪಕ್ಕೆ ಬರಲಿವೆ ಎಂದರು. ಆಪರೇಶನ್ ಸಿಂಧೂರ ಕಾರ್ಯಾಚರಣೆಯ ಬಗ್ಗೆ ಉಲ್ಲೇಖಿಸಿದ ಪ್ರಧಾನ ಮಂತ್ರಿಯವರು, ದೇಶದ ಸೈನಿಕರು ದೇಶವಿರೋಧಿ ಶಕ್ತಿಗಳನ್ನು ಹಿಮ್ಮೆಟ್ಟಿಸಿ, ಭಯೋತ್ಪಾದಕರ ಅಡಗುತಾಣಗಳನ್ನು ಧ್ವಂಸಗೊಳಿಸುವ ಮೂಲಕ ತಕ್ಕ ಪಾಠ ಕಲಿಸಿದ್ದಾರೆ ಎಂದರು.

<><><>

ಧ್ವನಿ: ಪ್ರಧಾನಮಂತ್ರಿ ನರೇಂದ್ರ ಮೋದಿ 30 ಸೆಕೆಂದುಗಳು

<><><>

ರಾಜ್ಯ ಸರ್ಕಾರವು ಪಂಚ ಗ್ಯಾರಂಟಿ ಯೋಜನೆಗಳ ಮುಖಾಂತರ ಜನರ ಆರ್ಥಿಕ ಸ್ವಾತಂತ್ರಕ್ಕಾಗಿ ಶ್ರಮಿಸುತ್ತಿದೆ ಎಂದು ಗೃಹ ಸಚಿವ ಡಾಕ್ಟರ ಜಿ.ಪರಮೇಶ್ವರ ಹೇಳಿದರು. ತುಮಕೂರು ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಜರುಗಿದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

<><><>

ಧಾರವಾಡ ಜಿಲ್ಲಾಡಳಿತದ ವತಿಯಿಂದ, ನಗರದ ಆರ್. ಎನ್ ಶೆಟ್ಟಿ ಕ್ರೀಡಾಂಗಣದಲ್ಲಿ, 79 ನೇ ಸ್ವಾತಂತ್ರ್ಯ ದಿನಾಚರಣೆ ಜರುಗಿತು. ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್ ಲಾಡ್ ರಾಷ್ಟ್ರಧ್ವಜರೋಹಣ ಗೈದು, ಸ್ವಾತಂತ್ರ್ಯ ದಿನದ ಶುಭ ಸಂದೇಶ ನೀಡಿದರು.

<><><>

ಧಾರವಾಡ ಆಕಾಶವಾಣಿ ಕೇಂದ್ರದಲ್ಲಿ ಜರುಗಿದ, ಸ್ವಾತಂತ್ರ್ಯ ದಿನಾಚರಣೆ ಸಮಾರಂಭದಲ್ಲಿ ಕೇಂದ್ರದ, ತಾಂತ್ರಿಕ ವಿಭಾಗದ ಉಪ ಮಹಾನಿರ್ದೇಶಕರಾದ ಕೆ. ಅರುಣ ಪ್ರಭಾಕರ್, ಕಾರ್ಯಕ್ರಮ ಮುಖ್ಯಸ್ಥರಾದ ಶರಣ ಬಸವ ಚೋಳಿನ ಸೇರಿದಂತೆ ಗಣ್ಯರು, ಸಿಬ್ಬಂದಿಗಳು ಪಾಲ್ಗೊಂಡಿದ್ದರು.

<><><>

ಹುಬ್ಬಳ್ಳಿ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಜರುಗಿದ ಕಾರ್ಯಕ್ರಮದಲ್ಲಿ, ಅಧ್ಯಕ್ಷರಾದ ಎಸ್.ಪಿ ಸಂಶಿಮಠ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು.

<><><>

ವಿಜಯಪುರ ಜಿಲ್ಲಾಡಳಿತದ ವತಿಯಿಂದ ಜರುಗಿದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ ಪಾಟೀಲ್ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಶಾಸಕ ಬಸವಗೌಡ ಪಾಟೀಲ್ ಯತ್ನಾಳ್ ಹಾಗೂ ಸಂಸದ ರಮೇಶ ಜಿಗಜಿಣಗಿ ಪಾಲ್ಗೊಂಡಿದ್ದರು.

<><><>

ಮಹಾತ್ಮ ಗಾಂಧಿ ಭವನದಲ್ಲಿ, ಜಿಲ್ಲಾಧಿಕಾರಿ ಡಾಕ್ಟರ ಆನಂದ್.ಕೆ ರಾಷ್ಟ್ರ ಧ್ವಜಾರೋಹಣ ಗೈದು, ಸ್ವಾತಂತ್ರ್ಯ ದಿನದ ಶುಭಾಶಯ ಕೋರಿದರು.

<><><>

ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ 79 ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ತಂಗಡಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿದರು.

<><><>

ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ, ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ರಾಷ್ಟ್ರ ಧ್ವಜಾರೋಹಣಗೈದು, ಸ್ವಾತಂತ್ರ್ಯ ದಿನಾಚರಣೆಯ ಸಂದೇಶ ವಾಚಿಸಿದರು.

<><><>

ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿತ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ, ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಧ್ವಜಾರೋಹಣ ನೆರವೇರಿಸಿದರು. ವಿವಿಧ ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿದರು.

<><><>

ಗದಗ ನಗರದ ಕೆ.ಎಚ್ ಪಾಟೀಲ್ ಕ್ರೀಡಾಂಗಣದಲ್ಲಿ ಜರುಗಿದ ಸ್ವಾತಂತ್ರ್ಯ ದಿನಾಚರಣೆ ಸಮಾರಂಭದಲ್ಲಿ ಪಾಲ್ಗೊಂಡ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ್ ಅವರು, ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಸ್ವಾತಂತ್ರ್ಯ ದಿನದ ಶುಭಾಶಯಗಳನ್ನು ತಿಳಿಸಿದರು.

<><><>

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ, ಕಲಬುರಗಿ, ಪೊಲೀಸ್ ಪರೇಡ್ ಮೈದಾನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ರಾ ್ಟ್ರ ಧ್ವಜಾರೋಹಣ ನೆರವೇರಿಸಿದರು. ಇದೇ ಸಂದರ್ಭ ಕಲಬುರಗಿಯ, ಶ್ರೀ ಶರಣ ಬಸವೇಶ್ವರ ಸಂಸ್ಥಾನದ 8 ನೇ ಪೀಠಾಧಿಪತಿ ಪೂಜ್ಯ ಡಾಕ್ಟರ ಶರಣಬಸವಪ್ಪ ಅಪ್ಪಾಜೀ ಅವರು ಲಿಂಗೈಕ್ಯರಾದ ಹಿನ್ನೆಲೆ ಗೌರವ ಸೂಚಕವಾಗಿ ಮೌನಾಚರಣೆಗೈದು, ಸಂತಾಪ ಸೂಚಿಸಲಾಯಿತು.

<><><>

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿ ಹಿನ್ನೆಲೆ, ಅವರ ಅಪ್ರತಿಮ ತ್ಯಾಗ ಬಲಿದಾನವನ್ನು ಸ್ಮರಿಸಿರುವ, ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಅವರು, ಗೌರವ ನಮನಗಳನ್ನು ಸಲ್ಲಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>